ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ಕೊಳಚೆ ಅಭಿವೃದ್ಧಿ ಮಂಡಳಿ ಕ್ರಿಯಾಯೋಜನೆ ಅನುಷ್ಠಾನದ ಬಗ್ಗೆ

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) -

99 (840) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಕಳೆದ 3 ವರ್ಷಗಳಿಂದ ಕೊಳಚೆ ಪ್ರದೇಶಗಳ ಅಭಿವೃದ್ಧಿ ಯೋಜನೆಯಡಿ ವಿವಿಧ ಕಾಮಗಾರಿಗಳಿಗೆ ಮಂಜೂರಾಗಿರುವ ಅನುದಾನವೆಷ್ಟು ; ಕ್ರಿಯಾ ಯೋಜನೆಯನ್ನು ತಯಾರಿಸಿ ಅನುಮೋದನೆಗೊಂಡಿರುವ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆಯೇ ; (ಯೋಜನಾವಾರು ಪೂರ್ಣ ಮಾಹಿತಿ ನೀಡುವುದು)

(ಆ) ಈ ಕ್ರಿಯಾ ಯೋಜನೆ ಅನ್ವಯ ಅನುಷ್ಠಾನಗೊಳಿಸಿದ ಕಾಮಗಾರಿಗಳು ಯಾವುವು ; ಮತ್ತು ಅನುಷ್ಠಾನಗೊಳಿಸದೆ ಅಪೂರ್ಣಗೊಂಡಿರುವ ಕಾಮಗಾರಿಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಇ) ಅಪೂರ್ಣಗೊಂಡಿರುವ ಕಾಮಗಾರಿಗಳನ್ನು ಪೂರ್ಣಗೊಳಿಸದೆ ನಿಲ್ಲಿಸಿರುವುದರಿಂದ, ಈ ಕಾಮಗಾರಿಗಳು ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಕಾಮಗಾರಿಗಳು ಅಪೂರ್ಣಗೊಳ್ಳಲು ಕಾರಣರಾದ ಗುತ್ತಿಗೆದಾರರು ಮತ್ತು ಮಂಡಳಿ ಅಧಿಕಾರಿಗಳ ಮೇಲೆ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)